ಎಂವಿಸಿ.973/2024
ಪಿಡಬ್ಲ್ಯು-2

ದಿನಾಂಕಃ 10-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆಃ</u>- ಅರ್ಜಿದಾರರ ಪರವಾಗಿ ಶ್ರೀ. ಎನ್.ಆರ್. ವಕೀಲರಿಂದಃ-**

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳೆಲ್ಲಾ ಸರಿಯಾಗಿವೆ ಮತ್ತು ಸತ್ಯವಾಗಿವೆ ಎಂದು ಪ್ರಮಾಣೀಕರಿಸಿ ನನ್ನ ಸಹಿ ಮಾಡಿರುತ್ತೇನೆ.

**<u>ಪಾಟೀ ಸವಾಲುಃ</u>- 2 ನೇ ಎದುರುದಾರರ ಪರವಾಗಿ ಶ್ರೀ. ಎನ್.ವಿ.ಎನ್. ವಕೀಲರಿಂದಃ-**

ಮೃತ ವೆಂಕಟೇಶ್ ಮೂರ್ತಿ ನನ್ನ ಗಂಡ. ಆ ದಿನ ನನ್ನ ಗಂಡ ಚಲಾಯಿಸುತ್ತಿದ್ದ ವಾಹನ ನನ್ನ ಅತ್ತೆಯ ಹೆಸರಿನಲ್ಲಿದೆ. ಅಪಘಾತವಾದ ನಂತರ ನನ್ನ ಗಂಡನನ್ನು ಮಧುಗಿರಿ ಸರ್ಕಾರಿ ಆಸ್ಪತ್ರೆಗೆ ಸೇರಿಸಿದೆವು. ನಂತರ ಅಲ್ಲಿಂದ ತುಮಕೂರಿನ ಶ್ರೀದೇವಿ ಆಸ್ಪತ್ರೆಗೆ ಕರೆದುಕೊಂಡು ಹೋದೆವು. ಈ ಅಪಘಾತದ ಬಗ್ಗೆ ಪೊಲೀಸರು ಮತ್ತು ವೈದ್ಯರ ಮುಂದೆ ಹೇಳಿಕೆ ನೀಡಿರುತ್ತೇನೆ. ಈ ಅಪಘಾತವು ನನ್ನ ಗಂಡನ ಅತೀ ವೇಗ ಮತ್ತ ಅಜಾಗರೂಕತೆಯಿಂದ ಚಾಲನೆಯಿಂದ ಉಂಟಾಗಿರುತ್ತದೆ ಎಂದರೆ ಸರಿಯಲ್ಲ. ನನ್ನ ಗಂಡ ಬೈಕ್ ಚಲಾಯಿಸಲು ಚಾಲನಾ ಪರವಾನಗಿ ಹೊಂದಿರಲಿಲ್ಲ ಎಂದರೆ ಸರಿಯಲ್ಲ. ಆ ಚಾಲನಾ ಪರವಾನಗಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ.

ನನ್ನ ಗಂಡ ಕಂಟ್ರಾಕ್ಟರ್ ಕೆಲಸ ಮಾಡುತ್ತಿದ್ದ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡ ತಿಂಗಳಿಗೆ ರೂ.50,000/- ಸಂಪಾದಿಸುತ್ತಿದ್ದ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಬಗ್ಗೆ ಯಾವುದೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ಸಮಯದಲ್ಲಿ 1 ನೇ ಅರ್ಜಿದಾರರು ಮತ್ತು ನನ್ನ ಗಂಡ ಒಟ್ಟಿಗೆ ವಾಸವಾಗಿದ್ದರು ಎಂದರೆ ಸರಿಯಲ್ಲ. ಅಪಘಾತವಾದಾಗ ನನ್ನ ಗಂಡನಿಗೆ ಸುಮಾರು 36 ವರ್ಷ ವಯಸ್ಸಾಗಿತ್ತು ಎಂದರೆ ಸರಿ.

ನನ್ನ ಗಂಡನ ಅಂತ್ಯ ಸಂಸ್ಕಾರಕ್ಕೆ ರೂ.ಒಂದು ಲಕ್ಷ ಖರ್ಚಾಗಿರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು 1 ನೇ ಅರ್ಜಿದಾರರ ಪರವಾಗಿ ಪರಿಹಾರ ಪಡೆಯಬೇಕೆಂಬ ಉದ್ದೇಶದಿಂದ ಸುಳ್ಳು ಅರ್ಜಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು 10 ವರ್ಷಗಳ ಕಾಲ ನನ್ನ ಗಂಡನ ಜೊತೆ ಸಂಸಾರ ನಡೆಸಿರುತ್ತೇನೆ. ನಾನು ಮತ್ತು ನನ್ನ ಗಂಡ ಎಂದೂ ಸಹ ಬೇರೆ ಬೇರೆಯಾಗಿ ವಾಸವಾಗಿರುವುದಿಲ್ಲ. ನನ್ನ ಗಂಡ ಬದುಕಿದ್ದಾಗ ಮಾನ್ಯ ಅಧಿಕ ಹಿರಿಯ ಸಿವಿಲ್ ನ್ಯಾಯಾಲಯ, ಮಧುಗಿರಿಯಲ್ಲಿ ವಿವಾಹ ವಿಚ್ಛೇದನ ಕೋರಿ ಅರ್ಜಿ ಸಲ್ಲಿಸಿರುವ ವಿಚಾರ ನನಗೆ ಗೊತ್ತಿಲ್ಲ. ಆ ಅರ್ಜಿ ನಾನು ಬೇರೆ ವಾಸವಾಗಿದ್ದ ಕಾರಣ

ಏಕಪಕ್ಷೀಯರಾಗಿದ್ದು, ಆ ಅರ್ಜಿಯಲ್ಲಿ ವಿವಾಹ ವಿಚ್ಛೇದನ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಎಂದೂ ಸಹ ನನ್ನ ಗಂಡನ ಜೊತೆ ವಾಸವಾಗಿಲ್ಲದೇ ಇರುವುದರಿಂದ ನಾನು ಆತನ ಆದಾಯದ ಮೇಲೆ ಅವಲಂಬಿತಳಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಗಂಡನ ಅಂತ್ಯ ಸಂಸ್ಕಾರಕ್ಕೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪರಿಹಾರ ಪಡೆಯುವ ಉದ್ದೇಶದಿಂದ ಈ ಅರ್ಜಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ನನ್ನ ಗಂಡನ ವಿರುದ್ಧ ವಿವಾಹ ವಿಚ್ಛೇದನ ಆಗಿರುವುದರಿಂದ ನಾನು ಆತನ ಆದಾಯದ ಮೇಲೆ ಅವಲಂಬಿತಳಾಗಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ– ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ